**ಇಂದು ದಿನಾಂಕ :** *15.02.2023* **ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ಮಾಡಿಸಲಾಯಿತು.**

**ಪಾಟೀ ಸವಾಲು : 2(ಎ) ನೇ ಪ್ರತಿವಾದಿ ಪರ ಶ್ರೀ. BVJ ವಕೀಲರಿಂದಃ**

ನನ್ನ ತಂದೆಗೆ ಆರೋಗ್ಯ ಸರಿ ಇಲ್ಲ ಎಂದು ತೋರಿಸಲು ದಾಖಲೆ ಹಾಜರು ಪಡಿಸಿಲ್ಲ. ಹಾಜರು ಪಡಿಸಲು ತೊಂದರೆ ಇಲ್ಲ. ನನ್ನ ತಂದೆ ಆರೋಗ್ಯವಾಗಿ ಇದ್ದಾರೆ ಮತ್ತು ನ್ಯಾಯಾಲಯಕ್ಕೆ ಬಂದು ಸಾಕ್ಷ್ಯ ಕೊಡುವ ಸಾಮಾರ್ಥ್ಯ ಇದ್ದರೂ ಸಹ ನಾನು ಉದ್ದೇಶ ಪೂರ್ವಕವಾಗಿ ಅವರ ಪರ ಸಾಕ್ಷ್ಯ ಕೊಡುತ್ತಿದ್ದೇನೆ ಎಂದರೆ ಸರಿಯಲ್ಲ. 1970 ನೇ ಸಾಲಿನಲ್ಲಿ ನನ್ನ ತಂದೆ ಮತ್ತು ಅವರ ಕುಟುಂಬದವರು ವಿಭಾಗ ಮಾಡಿಕೊಂಡಿದ್ದಾರೆ ಎಂದರೆ ಸರಿಯಲ್ಲ. ವಿಭಾಗ ಮಾಡಿಕೊಂಡು ಮತ್ತು ತಮ್ಮ ಹೆಸರಿಗೆ ಖಾತೆಯನ್ನು ಮಾಡಿಕೊಂಡು ಸ್ವಾಧೀನಾನುಭವದಲ್ಲಿ ಇದ್ದಾರೆ ಎಂದರೆ ಸರಿಯಲ್ಲ. ನಾವು ಮತ್ತು ನಮ್ಮ ತಂದೆ ಸೇರಿಕೊಂಡು ನಮ್ಮ ತಂದೆ ಭಾಗಕ್ಕೆ ಬಂದ ಸ್ವತ್ತುಗಳಲ್ಲಿ ಕಲ್ಲೆಗೌಡರಿಗೆ ಸ್ವತ್ತನ್ನು 1996 ರಲ್ಲಿ ಮಾರಾಟ ಮಾಡಿದ್ದೇವೆ ಎಂದರೆ ಸರಿಯಲ್ಲ. ಸಾಕ್ಷಿ ಸದರಿ ಕ್ರಯಪತ್ರ ನಿ.ಡಿ.15 ಸುಳ್ಳು ಆಗಿರುತ್ತದೆ ಎಂದು ನುಡಿಯುತ್ತಾರೆ.

ನಾನು ಪಿ.ಯು.ಸಿ. ಓದಿದ್ದೇನೆ. 1996 ನೇ ಸಾಲಿನ ಕ್ರಯಪತ್ರ ನೋಡಿಲ್ಲ. ಸದರಿ ಕ್ರಯಪತ್ರದಲ್ಲಿ ನಾನು ಮತ್ತು ನನ್ನ ತಂದೆ ನಮ್ಮ ಭಾಗಕ್ಕೆ ಬಂದಿರುವ ಆಸ್ತಿಯನ್ನು ಮಾರಾಟ ಮಾಡುತ್ತಿದ್ದೇವೆ ಎಂದು ನಮೂದು ಇದೆ ಎಂದರೆ ಸರಿಯಲ್ಲ. ಮಾರಾಟ ಮಾಡಿದ ಸ.ನಂ.144/2 ಎ ಎಂದರೆ ಸರಿಯಲ್ಲ. ನಾನು ಮತ್ತು ನನ್ನ ತಂದೆ ಜಮೀನು ಮಾರಾಟ ಮಾಡಿದ್ದರೂ ಸಹ ಮಾರಾಟ ಮಾಡಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಸದರಿ ಕ್ರಯಪತ್ರದಲ್ಲಿ ನಮ್ಮ ಕುಟುಂಬದಲ್ಲಿ ವಿಭಾಗ ಆಗಿರುವ ಬಗ್ಗೆ ನೇರವಾಗಿ ಒಪ್ಪಿಕೊಂಡಿದ್ದೇವೆ ಎಂದರೆ ಸರಿಯಲ್ಲ. ಆ ಕಾರಣಕ್ಕೆ ನಾನು ನನ್ನ ತಂದೆಯನ್ನು ನ್ಯಾಯಾಲಯಕ್ಕೆ ಸಾಕ್ಷ್ಯ ಕೊಡಲು ಹಾಜರು ಪಡಿಸಿಲ್ಲ ಎಂದರೆ ಸರಿಯಲ್ಲ.

ವಿಭಾಗದ ನಂತರ ಎಲ್ಲರೂ ಪ್ರತ್ಯೇಕವಾಗಿ ಖಾತೆ ಮಾಡಿಸಿಕೊಂಡು ಪ್ರತ್ಯೇಕವಾಗಿ ಸ್ವಾಧೀನದಲ್ಲಿದ್ದೇವೆ ಎಂದರೆ ಸರಿಯಲ್ಲ. ತಮ್ಮ ತಮ್ಮ ಹಿಸ್ಸೆಗೆ ಬಂದ ಸ್ವತ್ತುಗಳ ಮೇಲೆ ಪ್ರತ್ಯೇಕವಾಗಿ ಬ್ಯಾಂಕ್ ಮತ್ತು ಸೊಸೈಟಿಯಲ್ಲಿ ಸಾಲ ಪಡೆದುಕೊಂಡಿದ್ದಾರೆ ಎಂದರೆ ಸರಿಯಲ್ಲ. ಸಾಲದ ಬಗ್ಗೆ ಕಂದಾಯ ದಾಖಲೆಗಳಲ್ಲಿ ನಮೂದು ಇದೆ ಎಂದರೆ ಸರಿಯಲ್ಲ. ವಿಭಾಗದಲ್ಲಿ 2 ನೇ ಪ್ರತಿವಾದಿಗೆ ದಾವಾ ಐಟಂ ನಂ.9 , 12 ರಿಂದ 16 , 24 ಮತ್ತು 25 ಜಮೀನುಗಳು ಬಂದಿವೆ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿ ತನ್ನ ಭಾಗಕ್ಕೆ ಬಂದ ಸ್ವತ್ತುಗಳ ಖಾತೆ ಮಾಡಿಸಿಕೊಂಡು ಬ್ಯಾಂಕುಗಳಲ್ಲಿ ಸಾಲ ಪಡೆದಿದ್ದಾರೆ ಎಂದರೆ ಸರಿಯಲ್ಲ. ವಿಭಾಗದ ನಂತರ ಅವರವರ ಪಾಲಿಗೆ ಬಂದ ಆಸ್ತಿ ಅವರ ಸ್ವಂತ ಆಸ್ತಿಗಳು ಎಂದರೆ ಸರಿಯಲ್ಲ. ಭಾಗ ಆಗಿದ್ದರು ಸಹ ಆಗಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿ ಮೃತರಾದ ನಂತರ ಅವರ ಮಗಳು ಆಸ್ತಿಯನ್ನು ಅನುಭವಿಸುತ್ತಿದ್ದಾರೆ ಎಂದರೆ ಸರಿಯಲ್ಲ. ದಾವೆಯಲ್ಲಿ ಸ್ವತ್ತು ಖರೀದಿದಾರರನ್ನು ಉದ್ದೇಶಪೂರ್ವಕವಾಗಿ ಪಕ್ಷಗಾರರನ್ನಾಗಿ ಮಾಡಿಲ್ಲ ಎಂದರೆ ಸರಿಯಲ್ಲ. ನಾವು ಕ್ರಯಪತ್ರ ಬರೆದುಕೊಟ್ಟಿದ್ದರು ಸಹ ಉದ್ದೇಶಪೂರ್ವಕವಾಗಿ ಹಾಜರು ಪಡಿಸಿಲ್ಲ ಎಂದರೆ ಸರಿಯಲ್ಲ. ದಾವಾ ಆಸ್ತಿಯ ಮೇಲೆ ನನಗಾಗಲೀ ನನ್ನ ತಂದೆಗಾಗಲಿ ಯಾವುದೇ ವಿಭಾಗದ ಹಕ್ಕು ಇಲ್ಲ ಎಂದರೆ ಸರಿಯಲ್ಲ. ಎಲ್ಲಾ ವಿಷಯಗಳು ಗೊತ್ತಿದ್ದರು ಸಹ ಪ್ರತಿವಾದಿಯರ ಆಸ್ತಿ ಕಬಳಿಸಲು ಸುಳ್ಳು ದಾವೆ ಹಾಕಿದ್ದೇವೆ ಎಂದರೆ ಸರಿಯಲ್ಲ. ಎಲ್ಲಾ ಕಂದಾಯ ಖಾತೆಗಳಲ್ಲಿ ಹಿಸ್ಸೆ ಮೇರೆಗೆ ಖಾತೆಯಾಗಿದೆ ಎಂದರೆ ಸರಿಯಲ್ಲ. ನನ್ನ ತಂದೆ ಮತ್ತು ಅವರ ಸಹೋದರರು ಭಾಗ ಆಗಿರುವ ಕಾರಣ ಕಂದಾಯ ದಾಖಲೆಗಳನ್ನು ನಮೂದು ಮಾಡಲಾಗಿದೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : 6 ಮತ್ತು 7 ನೇ ಪ್ರತಿವಾದಿ ಪರ ಶ್ರೀ. ಜಿ.ಜಿ. ವಕೀಲರಿಂದಃ**

ದೇವರಾಜೇ ಅರಸ್ ನನ್ನ ತಾತ. ಅವರ ಹೆಂಡತಿಯ ಹೆಸರು ಸಾವಿತ್ರಮ್ಮ. ಇವರಿಗೆ 4 ಜನ ಗಂಡು ಮಕ್ಕಳು. ಅವರಿಗೆ 4 ಜನ ಹೆಣ್ಣುಮಕ್ಕಳು ಎಂದರೆ ಸರಿಯಲ್ಲ. ನಾನು ಹುಟ್ಟುವ ಪೂರ್ವದಲ್ಲಿ ಸದರಿ 4 ಜನ

ಹೆಣ್ಣುಮಕ್ಕಳು ಹುಟ್ಟಿದ್ದಾರೆ ಎಂದರೆ ಗೊತ್ತಿಲ್ಲ. ನನ್ನ ತಂದೆ ನ್ಯಾಯಾಲಯಕ್ಕೆ ಬಂದಿದ್ದರೆ ನಮ್ಮ ಕುಟುಂಬದ ವಂಶವೃಕ್ಷವನ್ನು ನನಗಿಂತ ಚೆನ್ನಾಗಿ ಹೇಳುತ್ತಿದ್ದರು ಎಂದರೆ ಸಾಕ್ಷಿ ಇರಬಹುದು ಎಂದು ನುಡಿಯುತ್ತಾರೆ. ದಾವೆ ಸಲ್ಲಿಸಲು ಮಾಹಿತಿಯನ್ನು ನಾನೇ ಹೇಳಿ ಬರೆಸಿದ್ದೇನೆ. ದಾವಾ ಅಂಶಗಳು ನನ್ನ ತಂದೆಗೆ ಗೊತ್ತು. ದಾವೆಯಲ್ಲಿ ನಾನು ಪಕ್ಷಗಾರನಲ್ಲ. 6 ನೇ ಪ್ರತಿವಾದಿಯನ್ನು ಬೆಂಗಳೂರಿಗೆ ಕೊಟ್ಟು ಮದುವೆ ಮಾಡಿದ್ದಾರೆ ಎಂದರೆ ಗೊತ್ತಿಲ್ಲ. 6 ನೇ ಪ್ರತಿವಾದಿಯ ಮದುವೆಯ ವಿಚಾರ ನನ್ನ ತಂದೆಗೆ ಗೊತ್ತು ಎಂದರೆ ಸರಿಯಲ್ಲ. 7 ನೇ ಪ್ರತಿವಾದಿ ಅರಕಲುಗೂಡಿಗೆ ಕೊಟ್ಟು ಮದುವೆ ಮಾಡಿದ್ದಾರೆ ಎಂದರೆ ಗೊತ್ತಿಲ್ಲ. ದೇವರಾಜೇ ಅರಸ್ ರವರ 3 ನೇ ಮಗಳು ಜಯಲಕ್ಷ್ಮಿ ಮೃತರಾಗಿದ್ದಾರೆ ಎಂದರೆ ಗೊತ್ತಿಲ್ಲ. ಪ್ರತಿವಾದಿ 8 ರಿಂದ 12 ಆಕೆಯ ವಾರಸುದಾರರು ಎಂದರೆ ಗೊತ್ತಿಲ್ಲ. ದೇವರಾಜೇ ಅರಸ್ ರವರ ಇನ್ನೊಬ್ಬ ಮಗಳು ಸರಸ್ವತಮ್ಮ ಇದ್ದಾರೆ ಮತ್ತು ಅವರನ್ನು ದಾವೆಯಲ್ಲಿ ಸೇರಿಸಿಲ್ಲ ಎಂದರೆ ಗೊತ್ತಿಲ್ಲ. ದೇವರಾಜೇ ಅರಸ್ ರವರ ಹೆಣ್ಣು ಮಕ್ಕಳನ್ನು ಬೆಟ್ಟದ ತುಂಗದ ನಾಗನಹಳ್ಳಿಯಲ್ಲಿ ವಿಧ್ಯಾಭ್ಯಾಸ ಮಾಡಿಸಿದ್ದಾರೆ ಎಂದರೆ ಗೊತ್ತಿಲ್ಲ. ಸಾಕ್ಷ್ಯ ಕೊಡುವ ಪೂರ್ವದಲ್ಲಿ ನನ್ನ ತಾತನಿಗೆ ಎಷ್ಟು ಜನ ಮಕ್ಕಳು ಎಂದು ನನ್ನ ತಂದೆಗೆ ಕೇಳಿದ್ದೇನೆ ಅವರು 4 ಜನ ಮಕ್ಕಳು ಎಂದು ಹೇಳಿದ್ದಾರೆ. ಅವರಿಗೆ ಹೆಣ್ಣು ಮಕ್ಕಳು ಇದ್ದಾರೋ ಇಲ್ಲವೊ ಕೇಳಿಲ್ಲ. ಎಲ್ಲಾ ದಾವಾ ಆಸ್ತಿಗಳು ಪಿತ್ರಾರ್ಜಿತ ಆಸ್ತಿಗಳು ಎಂದರೆ ಸಾಕ್ಷಿಯು ಕೆಲವು ಪಿತ್ರಾರ್ಜಿತ ಮತ್ತು ಸ್ವಯಾರ್ಜಿತ ಎಂದು ನುಡಿಯುತ್ತಾರೆ.

ಸ.ನಂ.8 , 9, 13 , 14 , 15 , 16, 144/2 ಎ, ಮತ್ತು 144/22 ಬಿ , 10/7 ಪಿತ್ರಾರ್ಜಿತ ಆಸ್ತಿಗಳು. ಸ.ನಂ. 12 ಸ್ವಯಾರ್ಜಿತ ಆಸ್ತಿ. ನನ್ನ ತಂದೆ ವ್ಯವಸಾಯದಿಂದ ಜೀವನ ಮಾಡುತ್ತಿದ್ದರು ಎಂದರೆ ಸಾಕ್ಷಿ ವ್ಯವಸಾಯ ಮತ್ತು ವ್ಯಾಪಾರ ಮಾಡುತ್ತಾರೆ ಎಂದು ನುಡಿಯುತ್ತಾರೆ. ನನ್ನ ತಂದೆ ಮನೆಯ ಹತ್ತಿರ ಕಿರಾಣಿ ಅಂಗಡಿ ಇಟ್ಟುಕೊಂಡಿದ್ದರು. ಅಂಗಡಿ ನಡೆಸಲು ಸುಂಕ ಕಟ್ಟ ಬೇಕು ಮತ್ತು ಸುಂಕ ಕಟ್ಟಿದ್ದಕ್ಕೆ ರಸೀದಿ ಕೊಡುತ್ತಾರೆ ಎಂದರೆ ಸರಿ. ರಸೀದಿಗಳನ್ನು ಹಾಜರು ಪಡಿಸಿಲ್ಲ. ಅಂಗಡಿಯ ಲೈಸೈನ್ಸ್ ಹಾಜರು ಪಡಿಸಿಲ್ಲ. ನನ್ನ ತಂದೆ ಯಾವುದೇ ವ್ಯಾಪಾರ ಮಾಡುತ್ತಿರಲಿಲ್ಲ ಎಂದರೆ ಸರಿಯಲ್ಲ. ನನ್ನ ತಾತನ

ಹೆಣ್ಣು ಮಕ್ಕಳ ಅಸ್ತಿಯನ್ನು ಕಬಳಿಸಲು ಅವರನ್ನು ದಾವೆಯಲ್ಲಿ ಸೇರಿಸಿಲ್ಲ ಎಂದರೆ ಸರಿಯಲ್ಲ. ಅವರು ಸ್ವತಃ ದಾವೆಯಲ್ಲಿ ಹಾಜರಾಗಿದ್ದಾರೆ ಎಂದರೆ ಸರಿ. ನನ್ನ ಚಿಕ್ಕಪ್ಪಂದಿರಿಗೆ ನಿನಗೆ ಎಷ್ಟು ಜನ ಸಹೋದರಿಯರು ಎಂದು ಕೇಳಿ ತಿಳಿದುಕೊಂಡಿಲ್ಲ. ಸ.ನಂ.12 ನನ್ನ ತಂದೆಯ ಸ್ವಂತ ಆಸ್ತಿ ಅಲ್ಲ ಮತ್ತು ಅದು ಒಟ್ಟು ಕುಟುಂಬದ ಆಸ್ತಿ ಎಂದರೆ ಸರಿಯಲ್ಲ. ನಮ್ಮ ಕುಟುಂಬದಲ್ಲಿ ನನ್ನ ತಂದೆ ಹಿರಿಮಗ ಎಂದರೆ ಸರಿ. ಆತನೇ ಮನೆಯ ಯಜಮಾನಿಕೆ ಮಾಡುತ್ತಿದ್ದರು ಎಂದರೆ ಸರಿಯಲ್ಲ. ವಾದಪತ್ರದಲ್ಲಿ ಸುಳ್ಳು ವಂಶವೃಕ್ಷ ತೋರಿಸಿದ್ದೇವೆ ಎಂದರೆ ಸರಿಯಲ್ಲ. ನನ್ನ ಸಹೋದರಿಯನ್ನು ದಾವೆಯಲ್ಲಿ ಸೇರಿಸಿಲ್ಲ. ಆಕೆಯ ಹೆಸರು ಸಂಧ್ಯಾ ರಾಣಿ. ದೇವರಾಜೇ ಅರಸ್ ರವರ ಹೆಣ್ಣು ಮಕ್ಕಳಿಗೆ ಆಸ್ತಿ ಕೊಡಬಾರೆಂದು ನಾವೆಲ್ಲ ಸೇರಿಕೊಂಡು ಸುಳ್ಳು ದಾವೆ ಹಾಕಿದ್ದೇವೆ ಎಂದರೆ ಸರಿಯಲ್ಲ. ಹೆಣ್ಣು ಮಕ್ಕಳಿಗೂ ದಾವಾ ಅಸ್ತಿಯಲ್ಲಿ ಹಕ್ಕು ಇದೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

***(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)***

**ಓ.ಹೆ.ಕೆ.ಸರಿ ಇದೆ.**

**ಹಿ.ಸಿ.ನ್ಯಾ ಮತ್ತು ಪ್ರ.ದ.ನ್ಯಾದಂ.**
**ಪಿರಿಯಾಪಟ್ಟಣ**